ಜನರಿಗೆ ಕೃತಜ್ಞತೆ ಸಲ್ಲಿಸದವನು, ಅಲ್ಲಾಹನಿಗೆ ಕೃತಜ್ಞತೆ ಸಲ್ಲಿಸುವುದಿಲ್ಲ

ಅಬೂ ಹುರೈರಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಜನರಿಗೆ ಕೃತಜ್ಞತೆ ಸಲ್ಲಿಸದವನು, ಅಲ್ಲಾಹನಿಗೆ ಕೃತಜ್ಞತೆ ಸಲ್ಲಿಸುವುದಿಲ್ಲ." [صحيح] [رواه أبو داود والترمذي وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿಸಿರುವುದೇನೆಂದರೆ, ಯಾರು ತಮಗೆ ಉಪಕಾರ ಮಾಡಿದ ಅಥವಾ ಒಳ್ಳೆಯದನ್ನು ಮಾಡಿದ ಜನರಿಗೆ ಕೃತಜ್ಞತೆ ಸಲ್ಲಿಸುವುದಿಲ್ಲವೋ, ಅವರು ಸಾಮಾನ್ಯವಾಗಿ ಅಲ್ಲಾಹನಿಗೂ ಕೃತಜ್ಞತೆ ಸಲ್ಲಿಸುವುದಿಲ್ಲ. ಏಕೆಂದರೆ ಇವೆರಡೂ ವಿಷಯಗಳು ಒಂದಕ್ಕೊಂದು ಸಂಬಂಧ ಹೊಂದಿವೆ. ಜನರ ಉಪಕಾರವನ್ನು ನಿರಾಕರಿಸುವುದು ಮತ್ತು ಅವರಿಗೆ ಕೃತಜ್ಞತೆ ಸಲ್ಲಿಸದಿರುವುದು ಯಾರ ಸ್ವಭಾವ ಅಥವಾ ಅಭ್ಯಾಸವಾಗಿರುತ್ತದೆಯೋ, ಅಲ್ಲಾಹನ ಅನುಗ್ರಹಗಳನ್ನು ನಿರಾಕರಿಸುವುದು ಮತ್ತು ಅವನಿಗೆ ಕೃತಜ್ಞತೆ ಸಲ್ಲಿಸುವಲ್ಲಿ ಕೊರತೆ ಮಾಡುವುದು ಕೂಡ ಅವರ ಅಭ್ಯಾಸವಾಗಿರುತ್ತದೆ.

https://sunnah.global/hadeeth/kn/show/66255